# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 34-ಗಂಗೇನಹಳ್ಳಿ, ಬೆಂಗಳೂರು.

ಸಂಖ್ಯೆ: ಸ.ಅ/ವಾ-34/ಪಿ.ಆರ್/03/2020-21 ದಿನಾಂಕ: 07-11-2020.

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ:21-09-2020. ರವರ ಆದೇಶದಂತೆ ದಿನಾಂಕ:07-11-2020 ರಂದು ವಾರ್ಡ್ ನಂ:34-ರ ಗಂಗೇನಹಳ್ಳಿ ಬಿಬಿಎಂಪಿ ಶಾಲೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### "ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ ತಿಮ್ಮರಸು | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ರಾಮ್‌ರಾವ್ | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ.34 |
| 3. | ಭೂಮೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 4. | ಎಂ.ನಾಗರಾಜು | ವಾರ್ಡ್ ನಂ: 34, ಸದಸ್ಯರು |
| 5. | ವಲಸಮ್ಮ ಕೆ.ಜಿ | ಮಾಜಿ ಸದಸ್ಯರು |
| 6. | ಮಲ್ಲಿಕಾರ್ಜುನ ನಾಯಕ್ ಎಸ್.ಜಿ | ಸದಸ್ಯರು ವಾರ್ಡ್ ಸಂಖ್ಯೆ-34 |
| 7. | ರಾಜು | ಸದಸ್ಯರು ವಾರ್ಡ್ ಸಂಖ್ಯೆ-34 |
| 8. | ಬಸವರಾಜು | ಬಿಬಿಎಂಪಿ ತಾಂತ್ರಿಕ ಸಹಾಯಕರು |
| 9. | ಸುವರ್ಣ ದೇವಿ | ಸಾರ್ವಜನಿಕರು |
| 10. | ಎಂ. ವೆಂಕಟೇಶ್ | ಸಾರ್ವಜನಿಕರು |
| 11. | ಸೋಮಶೇಖರ್ | ಸಾರ್ವಜನಿಕರು |
| 12. | ಆರ್. ಚಂದ್ರಶೇಖರ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| | | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ. ತಿಮ್ಮರಸು ಮತ್ತು ಕಾರ್ಯದರ್ಶಿಗಳಾದ ಶ್ರೀ ರಾಮ್‌ರಾವ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ: 34 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ವಾರ್ಡ್ ವ್ಯಾಪ್ತಿಯ ಸಾರ್ವಜನಿಕರುಗಳಿಗೆ ಕೋವಿಡ್-19 ರ ಪರಿಕ್ಷೆಯನ್ನು ಹೆಚ್ಚಿಸುವ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಮನೆಮನೆಯಿಂದ ಕಸ ಸಂಗ್ರಹಣ ಮತ್ತು ಸಾಗಣಿಕೆಯ ಕೆಲಸವನ್ನು ನಿರ್ವಹಿಸುತ್ತಿರುವ ಟಿಪ್ಪರ್ ಆಟೋ ಚಾಲಕರಿಗೆ ಮೈಕ್ ಪ್ರಚಾರ ಮಾಡಲು ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯ ಪಾರ್ಕ್‌ಗಳನ್ನು ವಾರಕ್ಕೆ 2 ಬಾರಿ ಸ್ವಚ್ಛತಾ ಕಾರ್ಯವನ್ನು ನಿರ್ವಹಿಸಲು ಅಗತ್ಯ ಕ್ರಮ ವಹಿಸುವಂತೆ ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.
- ಮುತ್ತಪ್ಪ ಬ್ಲಾಕಿನಲ್ಲಿ ಸಿಸಿ ರಸ್ತೆ ನಿರ್ಮಿಸುವ ಬಗ್ಗೆ ಕ್ರಮ ವಹಿಸುವಂತೆ ಸೂಚಿಸಲಾಯಿತು.
- ವಾಣಿ ಶಾಲೆಯ ಸುತ್ತಮುತ್ತಲಿನಲ್ಲಿ ಸ್ಲಾಬ್ ಅಳವಡಿಸಿರುವುದು ದುರಸ್ಥಿಗೊಂಡಿರುವುದನ್ನು ಸರಿ ಪಡಿಸುವಂತೆ ಸೂಚಿಸಲಾಯಿತು.

- ವಾರ್ಡ್ ಸಂಖ್ಯೆ 34 ರ ವ್ಯಾಪ್ತಿಯಲ್ಲಿ ಕಾವೇರಿ ನೀರಿನ ಸಮಸ್ಯೆಗಳಿರುವುದಾಗಿ ತಿಳಿಸಿರುತ್ತಾರೆ ಸದರಿ ವಿಷಯದ ಬಗ್ಗೆ ಕ್ರಮವಹಿಸಲು ಸಂಬಂಧಪಟ್ಟ ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳಿಗೆ ಸೂಚಿಸಲಾಯಿತು.
- ವಾರ್ಡ್ ಸಂಖ್ಯೆ 34 ರ ವ್ಯಾಪ್ತಿಯ ಬೀದಿ ದೀಪಗಳ ಬಗ್ಗೆ ತಿಳಿಸಲಾಗಿರುತ್ತದೆ. ಸದರಿ ದೂರಿನ ಬಗ್ಗೆ ವಿದ್ಯುತ್ ವಿಭಾಗದ ಸಹಾಯಕ ಅಭಿಯಂತರರು ರವರಿಗೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗದ ಸ್ವಚ್ಛತೆ ಬಗ್ಗೆ ಚರ್ಚಿಸಿ ಸ್ವಚ್ಛವಾಗಿಡಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು. ಈಗಾಗಲೇ ಕೆಲವು ಸ್ಥಳಗಳಲ್ಲಿ ತೀವ್ರವಾದ ಶುಚಿಗೊಳಿಸುವಿಕೆ ಮಾಡಿಸಲಾಗಿರುತ್ತದೆ.
- ವಾರ್ಡ್ ವ್ಯಾಪ್ತಿಯಲ್ಲಿನ ಪ್ರದೇಶಗಳಲ್ಲಿನ ಮರಗಳಲ್ಲಿ ಕೊಂಬೆಗಳು ಕೆಲವು ಹೊಣಗಿರುವುದನ್ನು ಕಡಿತಗೊಳಿಸಲಾಗಿರುತ್ತದೆ. ಉಳಿದವುಗಳನ್ನು ಮಾಡಲಾಗುವುದೆಂದು ತಿಳಿಸಿದರು.
- ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ : 34 ರವರು ಮಾತನಾಡಿ ಬ್ಲಾಕ್‌ಸ್ಪಾಟ್ ತೆರವುಗೊಳಿಸಲಾಗುವುದೆಂದು ಮತ್ತು ಸಿ.ಸಿ.ಕ್ಯಾಮರಾ ಅಳವಡಿಸಲು, ಮರದ ಕೊಂಬೆಗಳನ್ನು ಕತ್ತರಿಸಲು (ಟ್ರಿ ಟ್ರಿಮ್ಮಿಂಗ್) ಸೂಕ್ತ ಕ್ರಮ ಜರುಗಿಸಲಾಗುವುದೆಂದು ತಿಳಿಸಿದರು.
- ಬೆಸ್ಕಾಂ ರವರು ವಿದ್ಯುತ್ ಕಂಬಗಳಿಗೆ ತಗಲುವ ಮರದ ಕೊಂಬೆಗಳನ್ನು ಕಡಿತಗೊಳಿಸಿ ತಾವೆ ಸ್ವಚ್ಛಗೊಳಿಸುವಂತೆ ಸೂಚಿಸಲಾಯಿತು.
- ಬಿಡಬ್ಲ್ಯೂಎಸ್ಎಸ್‌ಬಿ ರವರಿಗೆ ಕೊಳವೆಗಳ ತಡೆ ಮತ್ತು ಒಳಚರಂಡಿ ಮಣ್ಣನ್ನು ತೆರವುಗೊಳಿಸುವಂತೆ ಸೂಚಿಸಲಾಗಿದೆ.
- ಖಾಲಿ ಸ್ಥಳಗಲ್ಲಿ ತ್ಯಾಜ್ಯವನ್ನು ಹಾಕುವುದರಿಂದ ಸುತ್ತಮುತ್ತಲಿನ ಸಾರ್ವಜನಿಕರುಗಳಿಗೆ ತುಂಬ ತೊಂದರೆಯಾಗುತ್ತಿರುವುದರಿಂದ ಅಂತಹ ಸ್ಥಳಗಳನ್ನು ಗುರುತಿಸಿ ಸ್ವಚ್ಛಗೊಳಿಸುವಂತೆ ಸೂಚಿಸಲಾಗಿದೆ.
- ವಾರ್ಡ್ ವ್ಯಾಪ್ತಿಯಲ್ಲಿನ ಬಿಬಿಎಂಪಿ ಪಾರ್ಕ್ ನಿರ್ವಹಣೆ ಮಾಡದಿರುವ ಬಗ್ಗೆ ಚರ್ಚಿಸಲಾಗಿ ನಿರ್ವಹಣೆಯ ಬಗ್ಗೆ ಅಗತ್ಯ ಕ್ರಮ ವಹಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿಲಾಯಿತು.
- ವಾರ್ಡ್ ಪ್ರದೇಶಗಳಲ್ಲಿ ಕಸ ಸಾಗಣಿಕೆ ಮಾಡುತ್ತಿರುವ ಆಟೋ ಟಿಪ್ಪರ್ ವಾಹನಗಳು ಮೈಕ್ ಅಳವಡಿಸದೇ ತ್ಯಾಜ್ಯ ಸಂಗ್ರಹಣೆ ಮತ್ತು ಸಾಗಣಿಕೆ ಮಾಡುತ್ತಿರುವುದು ಕಂಡುಬಂದಿರುತ್ತದೆ ಅದಕ್ಕೆ ಸಂಬಂಧ ಪಟ್ಟ ಘನತ್ಯಾಜ್ಯ ನಿರ್ವಹಣೆ ಕೋಶ ರವರಿಗೆ ಮೈಕ್ ಅಳವಡಿಸಲು ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ತ್ಯಾಜ್ಯ ವಿಗಂಡನೆ ಮಾಡದೆ ಮಿಶ್ರ ತ್ಯಾಜ್ಯ ಸಾಗಿಸುತ್ತಿರುವ ಬಗ್ಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.
- ಜಿಯೋ ಕೇಬಲ್ ರವರು ಸರಿಯಾಗಿ ಕೆಲಸ ನಿರ್ವಹಿಸದಿರುವ ಬಗ್ಗೆ ಕ್ರಮ ವಹಿಸುವಂತೆ ಸೂಚಿಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಕೂಲಂಕುಶವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 34, ಗಂಗೇನಹಳ್ಳಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 34, ಗಂಗೇನಹಳ್ಳಿ

<u>ಪ್ರತಿಯನ್ನು:-</u>

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಚೇರಿ ಕಡತಕ್ಕೆ.